ಬೇಲೂರು ಪಟ್ಟಣದಲ್ಲಿ ಪೋಲೀಸ್ ವಸತಿಗೃಹ ನಿರ್ಮಾಣ.

2404 (2814) ಶ್ರೀ ಪುಟ್ಟರಂಗನಾಥ್ ಎಸ್.ಹೆಚ್. (ಬೇಲೂರು) :— ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೇಲೂರು ಪಟ್ಟಣದಲ್ಲಿ ಪೋಲೀಸ್ ವಸತಿಗೃಹ ನಿರ್ಮಾಣಮಾಡುತ್ತಿದ್ದು ಪ್ರಸ್ತುತ ಕಾಮಗಾರಿ ಸ್ಥಗಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು?

ಇ) ಹಾಗಿಲ್ಲದಿದ್ದಲ್ಲಿ ಈ ಕಾಮಗಾರಿ ವಿಳಂಬವಾಗಲು ಕಾರಣಗಳೇನು.

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) :—

ಅ) ಈ ಕಾಮಗಾರಿಯನ್ನು 06-07-2001ರಿಂದ ಗುತ್ತಿಗೆದಾರರು ಪುನರಾರಂಭಿಸಿದ್ದು ಕಾಮಗಾರಿಯು ಪ್ರಗತಿಯಲ್ಲಿದೆ.

ಆ) ಗುತ್ತಿಗೆದಾರರು ಕಾಮಗಾರಿಯನ್ನು ಹಿಂದೆ ನಿಲ್ಲಿಸಿದ್ದು, ನೋಟೀಸನ್ನು ಜಾರಿ ಮಾಡಿದ ನಂತರ ಈಗ ಕಾಮಗಾರಿಯನ್ನು ಪುನರಾರಂಭಿಸುತ್ತಿದೆ.

ಕಾರಂಜಾ ನೀರಾವರಿ ಯೋಜನೆಯಲ್ಲಿ ಸಿಬ್ಬಂದಿ ಕೊರತೆ.

2405 (2205) ಶ್ರೀ ರಾಜೇಂದ್ರ ವರ್ಮ (ಹುಲ್‌ಸೂರ್) :— ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕಾರಂಜ ನೀರಾವರಿ ಯೋಜನೆಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು (ಹುದ್ದೆಗಳ ಪದನಾಮವಾರು ಅಂಕಿ ಅಂಶಗಳನ್ನು ಒದಗಿಸುವುದು)

ಆ) ಈ ಪೈಕಿ ಎಷ್ಟು ಹುದ್ದೆಗಳು ಭರ್ತಿಯಾಗಿವೆ ಹಾಗೂ ಎಷ್ಟು ಹುದ್ದೆಗಳು ಖಾಲಿಯಾಗಿವೆ;

ಇ) ಖಾಲಿಯಾಗಿರುವ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡುವುದಾಗಿ ಕಳೆದ ವಿಧಾನಸಭೆಯ ಅಧಿವೇಶನದ ಸಮಯದಲ್ಲಿ ಭರವಸೆ ನೀಡಿರುವುದು ನಿಜವಲ್ಲವೇ?

ಈ) ಹಾಗಿದ್ದಲ್ಲಿ ಇಲ್ಲಿಯವರೆವಿಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ವಿಳಂಭ ನೀತಿಯನ್ನು ಅನುಸರಿಸುತ್ತಿರಲು ಕಾರಣಗಳೇನು;